

ದಿನಾಂಕ: 06-07-2023 ರಂದು ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರಾದ ಶ್ರೀ ಮಧು ಬಂಗಾರಪ್ಪ ವಿಧಾನಸೌಧದ ಸಭಾಂಗಣದಲ್ಲಿ ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್ ಹೊರಟ್ಟಿ ಅವರ ಅಧ್ಯಕ್ಷತೆಯಲ್ಲಿ ಪದವೀಧರ ಹಾಗೂ ಶಿಕ್ಷಕರ ಮತಕ್ಷೇತ್ರದ ಪ್ರತಿನಿಧಿಗಳ ಸಭೆ ನಡೆಸಿ ಶೈಕ್ಷಣಿಕ ಕ್ಷೇತ್ರದ ಜ್ವಲಂತ ಸಮಸ್ಯೆಗಳ ಕುರಿತು ಸುಧೀರ್ಘವಾಗಿ ಚರ್ಚೆ ನಡೆಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ತು ಸದಸ್ಯರು, ಶಿಕ್ಷಣ ಇಲಾಖೆಯ ಉನ್ನತ ಅಧಿಕಾರಿಗಳು ಹಾಗೂ ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್ ಸಭೆಯಲ್ಲಿ ಭಾಗವಹಿಸಿದ್ದರು.